Akashvani : Bangalore
Regional Bulletin In Kannada
01.09.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರಿಂದ ರಾಜ್ಯದ ವಿವಿಧೆಡೆ ಬರ ಪರಿಶೀಲನೆ
- ಉದ್ಯಾನವನದ ಶೇಕಡಾ ೫ ರಷ್ಟು ಭೂಮಿ ಬಳಕೆ ಪ್ರಸ್ತಾವನೆ ಕುರಿತಂತೆ ಅಧಿವೇಶನದಲ್ಲಿ ಚರ್ಚೆ - ಮುಖ್ಯಮಂತ್ರಿ ಸ್ಪಷ್ಟನೆ
- ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿಯಿಂದ ಬಳ್ಳಾರಿ ಚಲೋ ಪಾದಯಾತ್ರೆ ; ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಚಾಲನೆ
- ಅಂತಾರಾಜ್ಯ ನದಿನೀರು ಹಂಚಿಕೆ ಕುರಿತಂತೆ ನವದೆಹಲಿಯಲ್ಲಿ ಜಲಸಂಪನ್ಮೂಲ ಸಚಿವರಿಂದ ಹಿರಿಯ ವಕೀಲರೊಂದಿಗೆ ಸಮಾಲೋಚನೆ

<><*<><>*><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಇಂದು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಬರ ಪರಿಶೀಲನೆ ನಡೆಸುತ್ತಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗದಗ ಜಿಲ್ಲೆಯ ಗದಗ ಹಾಗೂ ಮುಂಡರಗಿ ತಾಲೂಕಿನ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿ ಪರಿಶೀಲನೆ ನಡೆಸಿದರು. ಮುಂಡರಗಿ ತಾಲೂಕಿನ ಕದಾಂಪೂರ ಗ್ರಾಮದ ರೈತ ಶಂಕರಪ್ಪ ಗಾವರವಾಡ ಅವರ ಜಮೀನಿನ ಸೂರ್ಯಕಾಂತಿ ಮತ್ತು ಸುನೀತಾ ಈರಪ್ಪ ಪೂಜಾರ ಅವರ ಜಮೀನಿನ ಮೆಕ್ಕೆಜೋಳ, ಕಲ್ಲಪ್ಪ ಕಾಡಾಪ್ಪಗೋಳ ಅವರ ಜಮೀನಿನ ಹತ್ತಿ ಬೆಳೆಗಳನ್ನು ಪರಿಶೀಲಿಸಿದರು. ಬಳಿಕ ಅವರು ಗದಗ ತಾಲೂಕಿನ ಕುರ್ತಕೋಟಿ ಗ್ರಾಮದ ಶ್ರೀನಾಥ್ ಮಾರ್ತಾಂಡಗೌಡ ಅವರ ಜಮೀನಿನಲ್ಲಿನ ಶೇಂಗಾ, ಹತ್ತಿ, ಮೆಣಸಿನಕಾಯಿ ಬೆಳೆ ಮತ್ತು ಹುಲಕೋಟಿ ಗ್ರಾಮದ ಹನುಮಂತಪ್ಪ ಸೋಗಿನ ಅವರ ಜಮೀನಿನಲ್ಲಿನ ಮೆಕ್ಕೆಜೋಳವನ್ನು ಪರಿಶೀಲಿಸಿದರು. ಇನ್ನೊಂದೆಡೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮೈಸೂರಿನ ಕೆ.ಆರ್.ನಗರ ತಾಲೂಕಿನ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಳೆ ಕೊರತೆಯಿಂದ ಒಣಗುತ್ತಿರುವ ರಾಗಿ, ಹೊಗೆಸೊಪ್ಪು ಬೆಳೆಗಳನ್ನು ಪರಿಶೀಲಿಸಿ, ರೈತರೊಂದಿಗೆ ಸಮಾಲೋಚನೆ ನಡೆಸಿ ಮಾಹಿತಿ ಪಡೆದಿದ್ದಾರೆ. ಈ ವೇಳೆ ಕೆ.ಆರ್.ನಗರ ಶಾಸಕ ರವಿಶಂಕರ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ, ಜಿಲ್ಲಾ ಪಂಚಾಯತ್ ಸಿಇಒ, ಕೆ.ಆರ್.ನಗರ ತಹಶೀಲ್ದಾರ್, ಕೃಷಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಉದ್ಯಾನವನದ ಜಾಗದ ಶೇಕಡಾ ೫ ರಷ್ಟು ಬಳಕೆ ಪ್ರಸ್ತಾವನೆ ಕುರಿತಂತೆ ಪರಿಶೀಲನೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನ್ಯ ಉದ್ದೇಶಕ್ಕೆ ಲಾಲ್‌ಬಾಗ್ ಜಾಗ ನೀಡಿಕೆ ಬಗ್ಗೆಯೂ ಪರಾಮರ್ಶೆ ನಡೆಸಲಾಗುವುದು ಎಂದು ಹೇಳಿದ್ದಾರೆ. ಈ ಕುರಿತಂತೆ ಯಾರು ಆತಂಕಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ವಿಧಾನಸಭೆಯಲ್ಲಿ ಉದ್ಯಾನವನದ ಜಾಗದ ಕುರಿತಂತೆ ಮತ್ತೊಮ್ಮೆ ಚರ್ಚಿಸಲು ಅವಕಾಶ ನೀಡುವುದಾಗಿ ತಿಳಿಸಿದ್ದಾರೆ. ರಾಜ್ಯದಲ್ಲಿ ಈಗಾಗಲೇ ೧೦೯ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಇನ್ನು ಕೆಲವು ತಾಲೂಕುಗಳ ಕುರಿತು ಪರಿಶೀಲನೆ ನಡೆಸಿ, ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

<><*<><>*><>

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹಮ್ಮಿಕೊಂಡಿರುವ ಹತ್ತು ದಿನಗಳ 'ಬಳ್ಳಾರಿ ಚಲೋ' ಪಾದಯಾತ್ರೆಗೆ ರಾಯಚೂರು ಜಿಲ್ಲೆಯ ಲಿಂಗಸುಗೂರಿನಲ್ಲಿ ಚಾಲನೆ ದೊರೆತಿದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪಾದಯಾತ್ರೆಗೆ ಚಾಲನೆ ನೀಡಿದ್ದಾರೆ. ಈ ವೇಳೆ ಮಾತನಾಡಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅಧಿಕಾರ ವಹಿಸಿಕೊಂಡು ಮೂರು ತಿಂಗಳಾಗಿದ್ದು, ಏನು ಅಭಿವೃದ್ಧಿ ಕಾರ್ಯ ಕೈಗೊಂಡಿದ್ದೀರಿ ಎಂದು ಪ್ರಶ್ನಿಸಿದ್ದಾರೆ. ಬರ ಪರಿಹಾರದಲ್ಲೂ ಸರ್ಕಾರ ತಾರತಮ್ಯ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

<><*<><>*><>

ಪ್ರತಿಭಟನಾ ಮೆರವಣಿಗೆಗೂ ಮುನ್ನ ರಾಯಚೂರಿನಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಜ್ಯದಲ್ಲಿರುವುದು ಭ್ರಷ್ಟ ಹಾಗೂ ಜನವಿರೋಧಿ ಸರ್ಕಾರ ಎಂದು ದೂರಿದ್ದಾರೆ. ರಾಜ್ಯದಲ್ಲಿ ಬಿಜೆಪಿಯ ಹೊಸಯುಗ ಇಂದಿನಿಂದ ಆರಂಭವಾಗಲಿದೆ. ಭ್ರಷ್ಟ ಸರ್ಕಾರವನ್ನು ಕಿತ್ತೊಗೆಯುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದ್ದಾರೆ.

<><*<><>*><>

ಅಂತಾರಾಜ್ಯ ನದಿ ನೀರು ಹಂಚಿಕೆ ವ್ಯಾಜ್ಯಗಳು ಮತ್ತು ನೀರಾವರಿ ಯೋಜನೆಗಳ ಕುರಿತು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ನವದೆಹಲಿಯಲ್ಲಿ ಸುಪ್ರೀಂಕೋರ್ಟ್ ಹಿರಿಯ ನ್ಯಾಯವಾದಿ ಶ್ಯಾಮ್ ದಿವಾನ್ ಅವರೊಂದಿಗೆ ಸಮಾಲೋಚನೆ ನಡೆಸಿದರು. ಸಭೆಯಲ್ಲಿ ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಸೇರಿದಂತೆ ರಾಜ್ಯದ

ಕಾನೂನು ತಂಡದ ಹಿರಿಯ ಪ್ರತಿನಿಧಿಗಳು ಉಪಸ್ಥಿತರಿದ್ದರು. ಸಭೆಯಲ್ಲಿ ಮುಖ್ಯವಾಗಿ ಪ್ರಸ್ತುತ ಕಾವೇರಿ ಜಲಾನಯನ ಪ್ರದೇಶದಲ್ಲಿನ ನೈಜ ನೀರಿನ ಪರಿಸ್ಥಿತಿ ಹಾಗೂ ಸುಪ್ರೀಂ ಕೋರ್ಟ್‌ನಲ್ಲಿ ಕೈಗೊಳ್ಳಬೇಕಾದ ಮುಂದಿನ ಕಾನೂನಾತ್ಮಕ ಕ್ರಮಗಳ ಕುರಿತು ವಿಸ್ತೃತ ಸಮಾಲೋಚನೆ ನಡೆಸಲಾಯಿತು. ಇದೇ ವೇಳೆ, ಮೇಕೆದಾಟು ಯೋಜನೆಯ ಕುರಿತಂತೆಯೂ ಹಿರಿಯ ವಕೀಲರಿಗೆ ಸಚಿವರು ಮನವರಿಕೆ ಮಾಡಿದ್ದಾರೆ. ಕೃಷ್ಣಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ ಮುಳುಗಡೆ ಪ್ರದೇಶದ ಸವಾಲುಗಳು, ಭೂಸ್ವಾಧೀನ, ಪರಿಹಾರ ವಿತರಣೆ, ಸಂಧಾನ ಪ್ರಕ್ರಿಯೆ ಹಾಗೂ ನ್ಯಾಯಾಲಯದಲ್ಲಿನ ಕಾನೂನು ವ್ಯಾಜ್ಯಗಳ ತ್ವರಿತ ಇತ್ಯರ್ಥಕ್ಕೆ ರೂಪಿಸಬೇಕಾದ ಕಾರ್ಯತಂತ್ರಗಳ ಕುರಿತು ಗಂಭೀರ ಚರ್ಚೆ ನಡೆಸಿದ್ದಾರೆ.

<><*<><>*><>

ಈ ಬಾರಿ ಎಲ್ ನಿನೋ ಪ್ರಭಾವದಿಂದ ಮಳೆ ಕೊರತೆಯಾಗಿದ್ದು, ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಕೊರತೆ ಆಗದಂತೆ ಆದ್ಯತೆಯ ಮೇಲೆ ಕ್ರಮ ವಹಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ.ಖಂಡ್ರೆ ಸೂಚಿಸಿದ್ದಾರೆ. ಮಂಡ್ಯದಲ್ಲಿ ಜಿಲ್ಲಾ ಪಂಚಾಯತಿ ಸಿಇಒ ಕೆ.ಆರ್. ನಂದಿನಿ ಅವರಿಂದ ಇಲಾಖೆಯ ವಿವಿಧ ಯೋಜನೆಗಳ ಮಾಹಿತಿ ಪಡೆದ ಅವರು, ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಕೊರತೆ ಆಗದಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಲು ತಿಳಿಸಿದ್ದಾರೆ. ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ವಿಬಿಜಿ ರಾಮ್‌ಜಿಯಡಿ ಜಿಲ್ಲೆಯಲ್ಲಿ ಹೆಚ್ಚಿನ ಉದ್ಯೋಗ ನೀಡುವುದರ ಜೊತೆಗೆ ಗ್ರಾಮಾಭಿವೃದ್ಧಿಗೆ ಪೂರಕವಾದ ಕಾಮಗಾರಿ ಕೈಗೊಂಡು ಗ್ರಾಮಗಳಲ್ಲಿ ಶಾಶ್ವತವಾದ ಆಸ್ತಿಗಳ ನಿರ್ಮಾಣ ಮಾಡಲು ನಿರ್ದೇಶನ ನೀಡಿದ್ದಾರೆ. ಇ-ಸ್ವತ್ತಿಗಾಗಿ ಸಲ್ಲಿಸಿರುವ ಅರ್ಜಿಗಳ ತ್ವರಿತ ವಿಲೇವಾರಿ ಮಾಡುವಂತೆಯೂ ಆದೇಶಿಸಿದ ಸಚಿವರು, ಅರಿವು ಕೇಂದ್ರಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಯುವಜನರು ಬರುವಂತೆ ಮತ್ತು ಅವರಲ್ಲಿ ಓದುವ ಹವ್ಯಾಸ ಬೆಳೆಸಲು ಜಾಗೃತಿ ಮೂಡಿಸುವಂತೆಯೂ ಸಲಹೆ ನೀಡಿದ್ದಾರೆ.

<><*<><>*><>

ಬೆಂಗಳೂರಿನ ರುದ್ರಭೂಮಿಯಲ್ಲಿ ಸಂಗ್ರಹವಾಗುವ ಹೂವು, ಹಾರ ಸೇರಿದಂತೆ ತ್ಯಾಜ್ಯವನ್ನು ವೈಜ್ಞಾನಿಕವಾಗಿ ನಿರ್ವಹಿಸುವ ಉದ್ದೇಶಿದಿಂದ ಸ್ಥಳದಲ್ಲೇ ಕಾಂಪೋಸ್ಟ್ ಘಟಕ ನಿರ್ಮಿಸಲು ಕ್ರಮಕೈಗೊಳ್ಳಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರು ಕೇಂದ್ರ ಹಾಗೂ ಉತ್ತರ ನಗರಪಾಲಿಕೆ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಅವರು, ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ, ತ್ಯಾಜ್ಯನಿರ್ವಹಣೆ ಹಾಗೂ ಪಾದಚಾರಿಗಳ ಸುಗಮ ಸಂಚಾರಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳಿಗೆ ಹಲವು ನಿರ್ದೇಶನ ನೀಡಿದ್ದಾರೆ. ಸರ್.ಎಂ.ವಿಶ್ವೇಶ್ವರಯ್ಯ ರೈಲ್ವೆ ನಿಲ್ದಾಣದ ಬಳಿ ಪಾದಚಾರಿ ಮಾರ್ಗ

ಒತ್ತುವರಿಯಾಗಿರುವುದನ್ನು ಗಮನಿಸಿದ ಅವರು, ಕೂಡಲೇ ತೆರವುಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಜಲಾಶಯದ ಹಿನ್ನೀರಿನ ಪ್ರದೇಶದಲ್ಲಿ ಒತ್ತುವರಿಯಾಗಿರುವ ಜಮೀನುಗಳ ಜಂಟಿ ಸರ್ವೆ ಕಾರ್ಯವನ್ನು ೧೫ ದಿನಗಳೊಳಗಾಗಿ ಪೂರ್ಣಗೊಳಿಸಿ, ನಕ್ಷೆ ಸಹಿತ ಸಮಗ್ರ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಡಾ. ಕುಮಾರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಕೆ.ಆರ್.ಎಸ್ ಅಣೆಕಟ್ಟು ಹಿನ್ನೀರಿನ ಪ್ರದೇಶಗಳಲ್ಲಿ ಒತ್ತುವರಿ ಪ್ರಕರಣಗಳು ಹೆಚ್ಚುತ್ತಿದ್ದು, ಕಂದಾಯ ಇಲಾಖೆ ಹಾಗೂ ಕಾವೇರಿ ನಿಗಮದ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಒತ್ತುವರಿ ಜಮೀನುಗಳನ್ನು ನಿಖರವಾಗಿ ಗುರುತಿಸಬೇಕು ಎಂದು ನಿರ್ದೇಶನ ನೀಡಿದರು. ಸರ್ವೆ ಕಾರ್ಯಕ್ಕೆ ಅಗತ್ಯವಿರುವ ದಾಖಲೆಗಳು, ತಾಂತ್ರಿಕ ಮಾಹಿತಿ ಹಾಗೂ ಸ್ಥಳೀಯ ಸಹಕಾರ ನೀಡುವಂತೆ ಕಾವೇರಿ ನಿಗಮದ ಅಧಿಕಾರಿಗಳಿಗೆ ತಿಳಿಸಿದ್ದಾರೆ. ನಿಗದಿತ ಅವಧಿಯಲ್ಲಿ ಸರ್ವೆ ಪೂರ್ಣಗೊಳಿಸಿ ವರದಿ ಸಲ್ಲಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><*<><>*><>

ರಾಜ್ಯ ಸರ್ಕಾರ ಗುಟ್ಕಾ ನಿಷೇಧಿಸಿರುವುದನ್ನು ವಿರೋಧಿಸಿ ಅಡಿಕೆ ಬೆಳೆಗಾರರ ಒಕ್ಕೂಟ ಹಾಗೂ ವಿವಿಧ ಸಂಘಟನೆಗಳು ಇಂದು ಕರೆ ನೀಡಿದ್ದ 'ದಾವಣಗೆರೆ ಬಂದ್'ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಂದ್ ಹಿನ್ನೆಲೆಯಲ್ಲಿ ನಗರದ ಪ್ರಮುಖ ರಸ್ತೆಗಳಲ್ಲಿ ಸಾರಿಗೆ ಸಂಚಾರ ವ್ಯತ್ಯಯಗೊಂಡಿದ್ದು, ಸಾರ್ವಜನಿಕರು ಪರದಾಡುವಂತಾಯಿತು. ಅಡಿಕೆ ಬೆಳೆಯನ್ನೇ ನಂಬಿ ಬದುಕುತ್ತಿರುವ ಲಕ್ಷಾಂತರ ಬೆಳೆಗಾರರ ಹಿತರಕ್ಷಣೆಯನ್ನು ಕಡೆಗಣಿಸಿ ಸರ್ಕಾರ ದಿಢೀರ್ ಗುಟ್ಕಾ ನಿಷೇಧ ನಿರ್ಧಾರ ಕೈಗೊಂಡಿದೆ ಎಂದು ಆರೋಪಿಸಿ ಸಾವಿರಾರು ಬೆಳೆಗಾರರು ಮತ್ತು ವರ್ತಕರು ಆಕ್ರೋಶ ವ್ಯಕ್ತಪಡಿಸಿದರು.

ಮುನ್ನೆಚ್ಚರಿಕಾ ಕ್ರಮವಾಗಿ ನಗರದಾದ್ಯಂತ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

<><*<><>*><>

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಆರೋಪಿ ಪ್ರದೋಶ್‌ನನ್ನು ಸಾಕ್ಷಿದಾರನನ್ನಾಗಿ ಮಾಡಲು ಅವಕಾಶ ನೀಡುವ ವಿಚಾರಣಾ ನ್ಯಾಯಾಲಯದ ನಿರ್ಧಾರವನ್ನು ಪ್ರಶ್ನಿಸಿ, ಆರೋಪಿ ನಟ ದರ್ಶನ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಇಂದು ದರ್ಶನ್ ಅರ್ಜಿಯನ್ನು ನ್ಯಾಯಾಲಯ ಕೈಗೆತ್ತಿಕೊಳ್ಳುವ ಸಾಧ್ಯತೆಯಿದೆ. ವಿಚಾರಣಾ ನ್ಯಾಯಾಲಯದ ತೀರ್ಪಿಗೆ ತಡೆ ನೀಡುವಂತೆ ಅವರು ನ್ಯಾಯಾಲಯವನ್ನು ಕೋರಿದ್ದಾರೆ. ಪ್ರದೋಶ್‌ನನ್ನು ಸಾಕ್ಷಿದಾರರನ್ನಾಗಿ ಪರಿಗಣಿಸುವಲ್ಲಿ ತಾಂತ್ರಿಕ

ಕಾರಣಗಳು ಮತ್ತು ಕೆಳ ನ್ಯಾಯಾಲಯವು ಅನುಸರಿಸಿದ ಕಾರ್ಯವಿಧಾನವನ್ನು ಆರೋಪಿ ದರ್ಶನ್ ಪ್ರಶ್ನಿಸಿದ್ದಾರೆ.

<><*<><>*><>

ಪ್ರವಾಹದಿಂದ ಸಮಸ್ಯೆಗೆ ಸಿಲುಕಿರುವ ನೇಪಾಳದ ಜನರಿಗೆ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಶಾರದ ಪೀಠ ನೆರವಿಗೆ ಮುಂದಾಗಿದೆ. ಈ ಕುರಿತಂತೆ ಸುದ್ದಿಗಾರರೊಂದಿಗೆ ಮಾತನಾಡಿದ ಶೃಂಗೇರಿ ಶಾರದಾ ಪೀಠದ ಕಿರಿಯ ಜಗದ್ಗುರು ವಿಧುಶೇಖರ ಭಾರತಿ ಸ್ವಾಮೀಜಿ, ನೇಪಾಳದಲ್ಲಿ ಪ್ರಕೃತಿ ವಿಕೋಪ ಸಂಭವಿಸಿ ಸಾವು ನೋವು ಸಂಭವಿಸಿದೆ. ಈ ಹಿನ್ನೆಲೆಯಲ್ಲಿ ಶಾರದಾ ಮಠದ ಅಧಿಕಾರಿಗಳಿಗೆ ಈಗಾಗಲೆ ಸೂಚನೆ ನೀಡಲಾಗಿದ್ದು, ಅಲ್ಲಿನ ಜನರಿಗೆ ಅಗತ್ಯ ನೆರವು ನೀಡಲು ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>